**Bangalore**
**Regional News**
**04.03.2025 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಕರಾವಳಿ ಪ್ರದೇಶದಲ್ಲಿ ಪ್ರವಾಸೋದ್ಯಮಕ್ಕೆ ಪೂರಕ ಅಭಿವೃದ್ಧಿ ಕಾರ್ಯಯೋಜನೆ - ಸಚಿವ ಎಚ್.ಕೆ. ಪಾಟೀಲ್

2. ಶಾಸಕ ವೇದವ್ಯಾಸ್ ಕಾಮತ್ ವಿರುದ್ಧ ಪ್ರಕರಣ ದಾಖಲು ; ವಿಧಾನಸಭೆಯಲ್ಲಿ ಬಿಜೆಪಿ ನಾಯಕರಿಂದ ಆಕ್ಷೇಪ

3. ಆದ್ಯತೆ ಮೇರೆಗೆ ಗುತ್ತಿಗೆದಾರರ ಹಣ ಪಾವತಿ ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

4. ರಾಜ್ಯದ ಹಲವೆಡೆ ತಾಪಮಾನ ತೀವ್ರ ಹೆಚ್ಚಳ ; ಕಲಬುರಗಿಯಲ್ಲಿ ೩೯ ಡಿಗ್ರಿ ಸೆಲ್ಸಿಯೆಸ್ ಉಷ್ಣಾಂಶ ದಾಖಲು

5. ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಟೂರ್ನಿ ; ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿದ ಆಸ್ಟ್ರೇಲಿಯಾ

<><><>

ರಾಜ್ಯದಲ್ಲಿ ಮಾದಕ ವಸ್ತುಗಳ ಕಳ್ಳಸಾಗಣೆ ಮತ್ತು ಮಾರಾಟಕ್ಕೆ ರಾಜ್ಯಸರ್ಕಾರ ವಿಶೇಷ ಕ್ರಮ ಕೈಗೊಂಡಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಹರೀಶ್.ಬಿ.ಪಿ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು ಸೈಬರ್ ಅಪರಾಧ ಹೊರತು ಪಡಿಸಿ ಉಳಿದ ಅಪರಾಧಗಳ ಪ್ರಮಾಣ ಕಡಿಮೆಯಾಗಿದೆ. ಮಾದಕದ್ರವ್ಯ ಬಳಕೆಯಿಂದ ಆಗುವ ಅನಾಹುತಗಳ ಬಗ್ಗೆ ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜು ಕ್ಯಾಂಪಸ್ ನಲ್ಲಿ ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಅಕ್ರಮ ಮದ್ಯ ಮಾರಾಟ ತಡೆಗಟ್ಟಲು ಕಠಿಣ ಕ್ರಮಕೈಗೊಳ್ಳಲಾಗಿದೆ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಸ್ಪಷ್ಟಪಡಿಸಿದ್ದಾರೆ. ಕಾಂಗ್ರೆಸ್‌ನ ಮಹಾಂತೇಶ್ ಶಿವಾನಂದ್ ಕೌಜಲಗಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಅಕ್ರಮ ಮದ್ಯಮಾರಾಟಕ್ಕೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲೆಯಲ್ಲಿ ೩ ಸಾವಿರದ ೨೩೦ಕ್ಕೂ ಅಧಿಕ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಸಚಿವರ ಉತ್ತರಕ್ಕೆ ಅಸಮಾಧಾನ ವ್ಯಕ್ತಪಡಿಸಿ ಮಾತನಾಡಿದ ಬಿಜೆಪಿಯ ಸುನೀಲ್ ಕುಮಾರ್, ಅರಗ ಜ್ಞಾನೇಂದ್ರ, ಸಿದ್ದು ಸವದಿ, ರಾಜ್ಯದ ಪ್ರತಿ ಗ್ರಾಮದ ಕಿರಾಣಿ ಅಂಗಡಿಗಳಲ್ಲೂ ಅಕ್ರಮ ಮದ್ಯ ಮಾರಾಟ

ಮಾಡಲಾಗುತ್ತದೆ. ಇಲಾಖೆ ಅಂಗಡಿಯವರಿಗೆ ಗುರಿ ನಿಗದಿ ಪಡಿಸಿದ ಹಿನ್ನೆಲೆಯಲ್ಲಿ ಅಂಗಡಿ ಮಾಲೀಕರು ಮದ್ಯ ಮಾರಾಟ ಮಾಡಲು ಅಕ್ರಮ ದಾರಿ ಹಿಡಿದಿದ್ದಾರೆ ಎಂದು ಆರೋಪಿಸಿದರು. ಈ ವೇಳೆ ಮಧ್ಯ ಪ್ರವೇಶಿಸಿ ಮಾತನಾಡಿದ ಸಭಾಧ್ಯಕ್ಷ ಯು.ಟಿ.ಖಾದರ್ ಇದು ಪ್ರಶ್ನೋತರ ಕಲಾಪ ಚರ್ಚೆ ಮಾಡಲು ಅವಕಾಶವಿಲ್ಲ ಎಂದು ಸಲಹೆ ನೀಡಿದರು. ಶಾಸಕರಿಗೆ ತಮ್ಮ ಕ್ಷೇತ್ರದಲ್ಲಿ ಅಕ್ರಮ ಮದ್ಯ ಮಾರಾಟದ ಕುರಿತು ಮಾಹಿತಿ ಇದ್ದರೆ ಅದರ ಪಟ್ಟಿ ತಯಾರಿಸಿ ಇಲಾಖೆಗೆ ನೀಡಿ ಇಲಾಖೆ ಕ್ರಮ ಕೈಗೊಳ್ಳಲು ಅನುಕೂಲವಾಗುತ್ತದೆ ಎಂದರು. ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದಂತೆ ಕರ್ನಾಟಕ ಪ್ರವಾಸೋದ್ಯ ನೀತಿ ೨೦೨೪ -೨೯ ಅಡಿಯಲ್ಲಿ ಹಲವಾರು ಯೋಜನೆ ರೂಪಿಸಲಾಗಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ರಾಜ್ಯದ ೩೨೦ ಕಿಲೋಮೀಟರ್ ಉದ್ದದ ಕರಾವಳಿ ಪ್ರದೇಶವನ್ನು ಪ್ರವಾಸೋದ್ಯಮಕ್ಕೆ ಪೂರಕವಾಗುವಂತೆ ಅಭಿವೃದ್ಧಿ ಪಡಿಸಲು ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ರಚಿಸಲಾಗುವುದು ಎಂದು ಹೇಳಿದ್ದಾರೆ. ಎತ್ತಿನಹೊಳೆ ಯೋಜನೆಯಡಿ ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗೆ ಕುಡಿಯವ ನೀರು ಒದಗಿಸಲು ಆದ್ಯತೆ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಜಿ.ಕೆ. ವೆಂಕಟಾಶಿವ ರೆಡ್ಡಿ ಅವರ ಪ್ರಶ್ನೆಗೆ ಉತ್ತರಿಸಿದ ಉಪ ಮುಖ್ಯಮಂತ್ರಿ ಎತ್ತಿನಹೊಳೆ ಯೋಜನೆಯಲ್ಲಿ ೧೮ ಟಿಎಂಸಿ ಕುಡಿಯುವ ನೀರು ಕೊಡಬೇಕು. ಈ ಯೋಜನೆಯನ್ನು ಅನುದಾನ ಲಭ್ಯತೆಯ ಮೇರೆಗೆ ಮಾರ್ಚ್ ೨೦೨೭ ರಲ್ಲಿ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ ಎಂದು ವಿಧಾನಸಭೆಯಲ್ಲಿ ಸ್ಪಷ್ಟನೆ ನೀಡಿದ್ದಾರೆ.

<><><><>

ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ವೇದವ್ಯಾಸ ಕಾಮತ್ ವಿರುದ್ಧ ದಾಖಲಾದ ಎಫ್ಐಆರ್ ವಿಧಾನಸಭೆಯ ಶೂನ್ಯ ವೇಳೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿಗೆ ಕಾರಣವಾಯಿತು. ಶೂನ್ಯ ವೇಳೆಯಲ್ಲಿ ಬಿಜೆಪಿಯ ಉಪನಾಯಕ ಅರವಿಂದ ಬೆಲ್ಲದ ವಿಷಯ ಪ್ರಸ್ತಾಪಿಸಿ ಯಾವುದೇ ವಿಚಾರಣೆ ಮಾಡದೆ ವೇದವ್ಯಾಸ ಕಾಮತ್ ಮೇಲೆ ಮೇಲೆ ಎಫ್ಐಆರ್ ದಾಖಲಿಸಲಾಗಿದೆ ಇದು ಶಾಸಕರ ಹಕ್ಕುಗಳ ದಮನ ಮಾಡುವ ನೀತಿಯಾಗಿದೆ ಎಂದರು. ಅರವಿಂದ್ ಬೆಲ್ಲದ ಮಾತನ್ನು ಬೆಂಬಲಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ ಹಾಗೂ ಸುನೀಲ್ ಕುಮಾರ್ ಅವರು ಸಭಾಧ್ಯಕ್ಷರು ಶಾಸಕರ ರಕ್ಷಣೆಗೆ ಬರಬೇಕು ಎಂದು ಮನವಿ ಮಾಡಿದರು. ಶಾಸಕ ವೇದವ್ಯಾಸ ಕಾಮತ್ ಮಾತನಾಡಿ ಯಾವುದೇ ಕಾರಣ ವಿಲ್ಲದೆ ತಮ್ಮ ಮೇಲೆ ಎಫ್ಐಆರ್ ದಾಖಲಿಸಲಾಗಿದೆ ಎಂದರು. ಗೃಹ ಸಚಿವ ಡಾ. ಜಿ. ಪರಮೇಶ್ವರ್

ಪ್ರತಿಕ್ರಿಯಿಸಿ ಯಾವ ಕಾರಣಕ್ಕಾಗಿ ಎಫ್ಐಆರ್ ದಾಖಲಿಸಾಗಿದೆ ಎಂದು ಮಾಹಿತಿ ಪಡೆದು ನಾಳೆ ಉತ್ತರ ನೀಡುತ್ತೇನೆ ಎಂದು ಸ್ಪಷ್ಟಪಡಿಸಿದರು.

<><><>

ವಿಧಾನ ಪರಿಷತ್ ಕಲಾಪದಲ್ಲಿ ಇಂದು ಮೊದಲಿಗೆ ಸಂತಾಪ ಸೂಚಿಸುವ ಮೂಲಕ ಸಭಾಪತಿ ಬಸವರಾಜ್ ಹೊರಟ್ಟಿ ಚಾಲನೆ ನೀಡಿದರು. ಆನಾರೋಗ್ಯದ ಹಿನ್ನಲೆಯಲ್ಲಿ ನಿಧನರಾದ ಹಿರಿಯ ರಾಜಕಾರಣಿ ಹಾಗೂ ಪತ್ರಕರ್ತ ಖಾಜಿ ಆರ್ಷದ್ ಆಲಿ ನಿಧನಕ್ಕೆ ವಿಧಾನ ಪರಿಷತ್‌ನಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಸಚಿವ ಈಶ್ವರ್ ಖಂಡ್ರೆ ಮಾತನಾಡಿ, ಬೀದರ್ ಜಿಲ್ಲೆಯ ಹೆಸರಾಂತ ಪತ್ರಕರ್ತ, ಸಜ್ಜನ ರಾಜಕಾರಣಿ, ವಿಧಾನ ಪರಿಷತ್ತಿನ ಮಾಜಿ ಸದಸ್ಯ ಖಾಜಿ ಅರ್ಷದ್ ಅಲಿ ಅವರು ಮುತ್ಸದ್ದಿ ರಾಜಕಾರಣಿ ಎಂದು ತಿಳಿಸಿದರು. ನಂತರ ಸಭಾಪತಿ ಅವರು, ಸದನದಲ್ಲಿ ಕಡ್ಡಾಯವಾಗಿ ಹಾಜರಿರಬೇಕಾದ ಸಚಿವರು ಮತ್ತು ಅಧಿಕಾರಿಗಳ ಹೆಸರುಗಳನ್ನು ಓದಿ ಪ್ರಶ್ನೋತ್ತರ ಕಲಾಪ ಆರಂಭಿಸಿದರು.

<><><>

ಆದ್ಯತೆ ಮೇರೆಗೆ ಗುತ್ತಿಗೆದಾರರ ಬಿಲ್‌ಗಳನ್ನು ಪಾವತಿ ಮಾಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಏಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಖರ್ಗೆ ಅವರನ್ನು ಭೇಟಿ ಮಾಡಿದ ಕುರಿತಂತೆ ಸಮರ್ಥನೆ ನೀಡಿದರು. ಅವರು ಪಕ್ಷದ ಅಧ್ಯಕ್ಷರಾಗಿದ್ದು, ಪಕ್ಷದ ವಿಚಾರಗಳು ಹಾಗೂ ನೂತನ ಕಾಂಗ್ರೆಸ್ ಕಚೇರಿಗೆ ಗುದ್ದಲಿ ಪೂಜೆ ಮಾಡುತ್ತಿದ್ದು, ಈ ತಿಂಗಳಿನಲ್ಲಿಯೇ ದಿನಾಂಕ ನೀಡುವಂತೆ ಮನವಿ ಮಾಡಿದ್ದಾರೆ. ಇದೇ ವೇಳೆ ಚಿತ್ರರಂಗದ ಟೀಕೆ ಕುರಿತಂತೆ ಪ್ರತಿಕ್ರಿಯಿಸಿದ ಅವರು ರಾಜ್ಯದ ನೆಲ, ಜಲ, ಭಾಷೆ ಉಳಿಯಬೇಕು ಎಂದು ತಿಳಿಸಿದ್ದಾರೆ. ಚಿತ್ರರಂಗ ಬೆಳೆಯಬೇಕು ಎಂದರೆ ಸರ್ಕಾರ ಹಾಗೂ ಜನ ಬೇಕು ಎಂದು ಪ್ರತಿಕ್ರಿಯಿಸಿದ್ದಾರೆ.

<><><>

ಮೈಸೂರು ಆಕಾಶವಾಣಿ ಕೇಂದ್ರವು ೯೦ ವಸಂತಗಳನ್ನು ಪೂರೈಸಿದೆ. ಒಂಬತ್ತು ದಶಕಗಳಲ್ಲಿ ಸದಾಭಿರುಚಿಯ ಹಲವಾರು ಕಾರ್ಯಕ್ರಮಗಳನ್ನು ನೀಡಿರುವ ನಿಲಯ ೯೦ನೇ ಹುಟ್ಟುಹಬ್ಬವನ್ನು ವಿಶೇಷವಾಗಿ ಆಚರಿಸಲಿದೆ. ಇದೇ ೭ರಂದು ಒಂದು ದಿನದ ನುಡಿ ನಾದ ಸಂಗಮ ಎಂಬ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಿದೆ ಎಂದು ಮೈಸೂರು ಆಕಾಶವಾಣಿ ಮುಖ್ಯಸ್ಥರಾದ ಎಸ್.ಎಸ್ ಉಮೇಶ್ ತಿಳಿಸಿದ್ದಾರೆ. ಅಂದು ಬೆಳಗ್ಗೆ ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯ ವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿದೆ. ನವದೆಹಲಿಯ ಆಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ. ಪ್ರಜ್ಞಾ ಪಾಲೀವಾಲ್

ಗೌರ್ ಜಾಥಾದಲ್ಲಿ ಭಾಗವಹಿಸಲಿದ್ದಾರೆ. ಕಚೇರಿಯ ಆವರಣದಲ್ಲಿ ವಿವಿಧ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದೆ. ಸಂಜೆ ೪:೩೦ಕ್ಕೆ ಕನ್ನಡ ಸಂಸ್ಕೃತಿ ಇಲಾಖೆವತಿಯಿಂದ ವಿವಿಧ ಜಾನಪದ ಕಲಾ ತಂಡಗಳಿಂದ ಕಲಾ ಪ್ರದರ್ಶನ ಏರ್ಪಡಿಸಲಾಗಿದೆ. ಸಂಜೆ ೫ ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮವನ್ನು ನವದೆಹಲಿ ಆಕಾಶವಾಣಿಯ ಮಹಾ ನಿರ್ದೇಶಕರಾದ ಡಾ. ಪ್ರಜ್ಞಾ ಪಾಲೀವಾಲ್ ಗೌರ್‌ರವರು ಉದ್ಘಾಟನೆ ಮಾಡಲಿದ್ದಾರೆ.

ಧ್ವನಿ : ಆಕಾಶವಾಣಿ ಉಪ ನಿರ್ದೇಶಕ ಹಾಗೂ ಮುಖ್ಯಸ್ಥ ಎಸ್.ಎಸ್ ಉಮೇಶ್

<><><><>

ಮೈಸೂರಿನ ಕೇಂದ್ರ ಸಂವಹನ ಇಲಾಖೆಗೆ ತುಮಕೂರಿನ ಸಿದ್ಧಗಂಗಾ ಮಠದ ಆವರಣದಲ್ಲಿ ನಡೆದ ಕೃಷಿ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನದಲ್ಲಿ ಆಯೋಜಿಸಿದ್ದ ಛಾಯಾಚಿತ್ರ ಪ್ರದರ್ಶನಕ್ಕೆ ಪ್ರಥಮ ಸ್ಥಾನ ದೊರೆತಿದೆ. ಸಿದ್ಧಗಂಗಾ ಮಠದಲ್ಲಿ ಫೆಬ್ರವರಿ ೧೬ ರಿಂದ ನಿನ್ನೆಯವರೆಗೆ ನಡೆದ ಪ್ರದರ್ಶನದಲ್ಲಿ ವಿಕಸಿತ ಭಾರತ ಬಜೆಟ್ ೨೦೨೫-೨೬ ಸೇರಿದಂತೆ ಕೇಂದ್ರ ಸರ್ಕಾರ ಯೋಜನೆಗಳ ಬಗ್ಗೆ ತಿಳಿಸುವ ಛಾಯಾಚಿತ್ರದೊಂದಿಗೆ ಫಲಾನುಭವಿಗಳ ಅನಿಸಿಕೆ ತಿಳಿಸುವ ವಿಡಿಯೋ ಪ್ರದರ್ಶನ ಮಾಡಲಾಗಿತ್ತು. ಸಮಾರೋಪ ಸಮಾರಂಭದಲ್ಲಿ ಸಿದ್ಧಗಂಗಾ ಮಠಾಧೀಶರಾದ ಶ್ರೀ ಸಿದ್ಧಲಿಂಗ ಸ್ವಾಮೀಜಿ ಅವರು ಕೇಂದ್ರ ಸಂವಹನ ಇಲಾಖೆ ಏರ್ಪಡಿಸಿದ್ದ ಪ್ರದರ್ಶನ ಮಳಿಗೆ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಧ್ವನಿ : ಶ್ರೀ ಸಿದ್ಧಲಿಂಗಸ್ವಾಮೀಜಿ

ಈ ಸಂದರ್ಭದಲ್ಲಿ ಕೇಂದ್ರ ಸಂವಹನ ಇಲಾಖೆ ಕ್ಷೇತ್ರ ಪ್ರಚಾರ ಅಧಿಕಾರಿ ಶ್ರುತಿ ಎಸ್.ಟಿ, ಕ್ಷೇತ್ರ ಪ್ರಚಾರ ಸಹಾಯಕ ಸಿ.ಕೆ ಸುರೇಶ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ಮಾರ್ಚ್ ಆರಂಭದಲ್ಲೇ ರಾಜ್ಯದ ತಾಪಮಾನ ಭಾರೀ ಪ್ರಮಾಣದಲ್ಲಿ ಹೆಚ್ಚಳವಾಗಿದೆ. ಕರಾವಳಿಯಲ್ಲಿ ಬಿಸಿಗಾಳಿಯ ವಾತಾವರಣವಿದ್ದು, ಉತ್ತರಕನ್ನಡ ಜಿಲ್ಲೆಯ ಕಾರವಾರದಲ್ಲಿ ೩೫.೪ ಡಿಗ್ರಿ, ಹೊನ್ನಾವರದಲ್ಲಿ ೩೪ ಡಿಗ್ರಿ ಸೆಲ್ಸಿಯೆಸ್ ಉಷ್ಣಾಂಶ ದಾಖಲಾಗಿದೆ. ಉತ್ತರ ಕರ್ನಾಟಕ ಜಿಲ್ಲೆಗಳಲ್ಲೂ ತಾಪಮಾನದಲ್ಲಿ ಭಾರೀ ಏರಿಕೆಯಾಗಿದೆ. ಕರಾವಳಿ ಕರ್ನಾಟಕದ ಮೂರು ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರಕನ್ನಡ ಜಿಲ್ಲೆಗಳಲ್ಲಿ ಮುಂದಿನ ೫ ದಿನಗಳ ಕಾಲ ಬಿಸಿಗಾಳಿ ಇರಲಿದೆ. ಇಂದು ಅತಿಹೆಚ್ಚು ಉಷ್ಣಾಂಶ ಕಲಬುರಗಿಯಲ್ಲಿ ೩೯ ಡಿಗ್ರಿ ಸೆಲ್ಸಿಯೆಸ್ ದಾಖಲಾಗಿದೆ. ಅತಿಕಡಿಮೆ ೧೬.೬ ಡಿಗ್ರಿ ಸೆಲ್ಸಿಯೆಸ್ ಬೀದರ್‌ನಲ್ಲಿ ದಾಖಲಾಗಿದೆ.

<><><><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಭಾರತ ವಿರುದ್ಧ ಆಸ್ಟ್ರೇಲಿಯಾ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡಿದೆ. ಭಾರತ ತಂಡದಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. ನ್ಯೂಜಿಲೆಂಡ್ ವಿರುದ್ಧ ಕಣಕ್ಕಿಳಿದ ತಂಡವನ್ನು ಮುಂದುವರಿಸಲಾಗಿದೆ. ಇತ್ತೀಚಿನ ವರದಿ ಬಂದಾಗ ಆಸ್ಟ್ರೇಲಿಯಾ ೧.೩ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೩ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>